# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 911 |
| ಮಾನ್ಯ ಸದಸ್ಯರ ಹೆಸರು | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 24.08.2026 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು; | ಕಲಬುರಗಿ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 73 ಮೆಟ್ರಿಕ್ ಪೂರ್ವ ಹಾಗೂ 65 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಹೀಗೆ ಒಟ್ಟು 138 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತವೆ.<br><br>ಯಾದಗಿರಿ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 44 ಮೆಟ್ರಿಕ್ ಪೂರ್ವ ಹಾಗೂ 23 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಹೀಗೆ ಒಟ್ಟು 67 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ. |
| ಆ) | ಸದರಿ ವಸತಿ ನಿಲಯಗಳಲ್ಲಿ ಎಷ್ಟು ಕಟ್ಟಡಗಳು ಖಾಸಗಿ ಹಾಗೂ ಸರ್ಕಾರಿ ಕಟ್ಟಡಗಳಿವೆ; ಖಾಸಗಿ ಕಟ್ಟಡದಲ್ಲಿ ವಸತಿ ನಿಲಯಗಳನ್ನು ನಡೆಸುತ್ತಿರುವುದಕ್ಕೆ ಮಾಸಿಕ ಎಷ್ಟು ಬಾಡಿಗೆ ಪಾವತಿಸಲಾಗುತ್ತಿದೆ; ಸದರಿ ವಸತಿ ನಿಲಯಗಳಲ್ಲಿ ಮೂಲ ಸೌಕರ್ಯಗಳಿಲ್ಲದೆ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಮಾಸಿಕ ಪ್ರತಿ ವಿದ್ಯಾರ್ಥಿಗೆ ಎಷ್ಟು ಹಣ ಖರ್ಚು ಮಾಡಲಾಗುತ್ತಿದೆ: ಹಾಗೂ ನೀಡುವ ಸೌಲಭ್ಯಗಳೇನು; (ವಿವರ ನೀಡುವುದು) | ಕಲಬುರಗಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 138 ವಿದ್ಯಾರ್ಥಿನಿಲಯಗಳ ಪೈಕಿ 87 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ, 43 ವಿದ್ಯಾರ್ಥಿಗಳು ಖಾಸಗಿ ಕಟ್ಟಡಗಳಲ್ಲಿ ಹಾಗೂ 08 ವಿದ್ಯಾರ್ಥಿನಿಲಯಗಳು ಉಚಿತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 43 ಖಾಸಗಿ ಬಾಡಿಗೆ ಕಟ್ಟಡಗಳಿಗೆ ಮಾಸಿಕ ರೂ.19.08ಲಕ್ಷಗಳ ಬಾಡಿಗೆ ಪಾವತಿಸಲಾಗುತ್ತಿದೆ.<br><br>ಯಾದಗಿರಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 67 ವಿದ್ಯಾರ್ಥಿನಿಲಯಗಳ ಪೈಕಿ 52 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ, 09 ವಿದ್ಯಾರ್ಥಿಗಳು ಖಾಸಗಿ ಕಟ್ಟಡಗಳಲ್ಲಿ ಹಾಗೂ 06 ವಿದ್ಯಾರ್ಥಿನಿಲಯಗಳು ಉಚಿತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 09 ಖಾಸಗಿ ಬಾಡಿಗೆ ಕಟ್ಟಡಗಳಿಗೆ ಮಾಸಿಕ ರೂ.4.50ಲಕ್ಷಗಳ ಬಾಡಿಗೆ ಪಾವತಿಸಲಾಗುತ್ತಿದೆ.<br><br>ಇಲಾಖೆಯ ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವಿದ್ಯಾರ್ಥಿನಿಲಯಗಳಲ್ಲಿ ಅನುದಾನದ ಲಭ್ಯತೆಯನುಸಾರ ಅಗತ್ಯ ಮೂಲಭೂತ ಸೌಕರ್ಯಗಳಾದ ಟೂ ಟಯರ್ ಕಾಟ್, ಬೆಡ್, ಜಮಖಾನ-ಹೊದಿಕೆ, ಸೋಲಾರ್ ವಾಟರ್ ಹೀಟರ್, ಕ್ರೀಡಾ ಸಾಮಗ್ರಿಗಳು, ವಾಟರ್ ಪ್ಯೂರಿಫೈಯರ್, ಸಿ.ಸಿ.ಕ್ಯಾಮೆರಾ ಮತ್ತು ಇನ್ನಿತರೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು |

ಒದಗಿಸಲಾಗಿರುತ್ತದೆ. ವಿದ್ಯಾರ್ಥಿನಿಲಯಗಳ ಸಂಖ್ಯಾಬಲಕ್ಕೆ ಅನುಗುಣವಾಗಿ ಸೌಕರ್ಯಗಳನ್ನು ಹೊಂದಿರುವ ಬಾಡಿಗೆ ಕಟ್ಟಡಗಳನ್ನು ಪಡೆದು ನಿರ್ವಹಿಸಲಾಗುತ್ತಿದ್ದು, ಕೆಲವೊಂದು ಬಾಡಿಗೆ ಕಟ್ಟಡಗಳಲ್ಲಿ ಅಗತ್ಯ ಸೌಕರ್ಯಗಳನ್ನು ಕಲ್ಪಿಸಲು ಸಾಧ್ಯವಾಗಿರುವುದಿಲ್ಲ.

ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್-ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ನಿಲಯಾರ್ಥಿಗಳಿಗೆ ವೆಚ್ಚ ಮಾಡಲಾಗುತ್ತಿರುವ ಅನುದಾನದ ವಿವರಗಳು ಈ ಕೆಳಕಂಡಂತಿವೆ.

1. ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯದ ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.1750/-ಗಳು ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯದ ಪ್ರತಿ ವಿದ್ಯಾರ್ಥಿಗೆ ರೂ.1850/- ಭೋಜನಾ ವೆಚ್ಚ ನೀಡಲಾಗುತ್ತದೆ.
2. ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯದ ಬಾಲಕರಿಗೆ ಪ್ರತಿ ಮಾಹೆಯಾನ ರೂ.171/-ರ ವೆಚ್ಚದಲ್ಲಿ ನಿರ್ಮಲ ಕಿಟ್ ಹಾಗೂ ಬಾಲಕಿಯರಿಗೆ ರೂ.193/-ರ ವೆಚ್ಚದಲ್ಲಿ ಸಿರಿಗಂಧ ಕಿಟ್ ಒದಗಿಸಲಾಗುತ್ತಿದೆ.
3. ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯಗಳಲ್ಲಿನ ಪ್ರತಿ ವಿದ್ಯಾರ್ಥಿಗೆ ಕ್ಷೌರಕ್ಕಾಗಿ ಎರಡು ತಿಂಗಳಿಗೊಮ್ಮೆ ರೂ. 60/- ರಂತೆ (ವಾರ್ಷಿಕವಾಗಿ 5 ಬಾರಿ ಮಾತ್ರ) ಒಟ್ಟು 300/- ರೂ.ಗಳನ್ನು ನೀಡಲಾಗುತ್ತಿದೆ.
4. ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯದ ಪ್ರತಿ ವಿದ್ಯಾರ್ಥಿಗೆ ರೂ.400/-ರ ವೆಚ್ಚದಲ್ಲಿ ವರ್ಷಕ್ಕೆ ಲೇಖನ ಸಾಮಗ್ರಿ ನೀಡಲಾಗುತ್ತಿದೆ.
5. ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಪ್ರತಿ ವರ್ಷ ಹೊಸದಾಗಿ ಪ್ರವೇಶ ಪಡೆದ ಮತ್ತು 3 ವರ್ಷ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ರೂ.1044.00 ಗಳ ವೆಚ್ಚದಲ್ಲಿ ಜಮಖಾನ, ಬೆಡ್‌ಶೀಟ್ ಮತ್ತು ಜಕಾರ್ಡ್ ಬೆಡ್‌ಶೀಟ್‌ಗಳನ್ನು ಒದಗಿಸಲಾಗುತ್ತದೆ.
6. ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ ಪ್ರತಿ ವರ್ಷ ಒಂದು ಜೊತೆ ನೈಟ್ ಡ್ರೆಸ್ ಮತ್ತು ಒಂದು ಜೊತೆ ಟ್ರ್ಯಾಕ್‌ಸೂಟ್‌ಗಳನ್ನು ಒದಗಿಸಲಾಗುತ್ತದೆ.

ಸದರಿ ವೆಚ್ಚಗಳೊಂದಿಗೆ ವಿದ್ಯಾರ್ಥಿ ನಿಲಯಗಳಲ್ಲಿ ಈ ಕೆಳಕಂಡ ವೆಚ್ಚಗಳನ್ನು ಭರಿಸಲಾಗುತ್ತದೆ.

1. ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ ಪ್ರಥಮ ಬಾರಿಗೆ ರೂ.50000/- ಹಾಗೂ ನಂತರದಲ್ಲಿ ಪ್ರತಿ ವರ್ಷಕ್ಕೆ ರೂ.5000/ಗಳ ಸುಸಜ್ಜಿತ ಗ್ರಂಥಾಲಯ ವ್ಯವಸ್ಥೆಯನ್ನು ಒದಗಿಸಲಾಗುತ್ತಿದೆ.
2. ಮೆಟ್ರಿಕ್ ನಂತರದ ಸಾಮಾನ್ಯ ವಿದ್ಯಾರ್ಥಿನಿಲಯಗಳಿಗೆ ಪ್ರಥಮ ಬಾರಿಗೆ ರೂ.1.00 ಲಕ್ಷ ನಂತರದದಲ್ಲಿ ಪ್ರತಿ ವರ್ಷಕ್ಕೆ

<table>
<tr>
<td></td>
<td></td>
<td>ರೂ.20000/-ಗಳಂತೆ ಹಾಗೂ ಮೆಟ್ರಿಕ್ ನಂತರದ ಸ್ನಾತಕೋತರ / ವೃತ್ತಿಪರ ವಿದ್ಯಾರ್ಥಿನಿಲಯಗಳಿಗೆ ಪ್ರಥಮ ಬಾರಿಗೆ ರೂ.1.25 ಲಕ್ಷ ನಂತರದದಲ್ಲಿ ಪ್ರತಿ ವರ್ಷಕ್ಕೆ ರೂ.30000/-ಗಳ ವೆಚ್ಚದಲ್ಲಿ ಸುಸಜ್ಜಿತ ಗ್ರಂಥಾಲಯದ ವ್ಯವಸ್ಥೆಯನ್ನು ಒದಗಿಸಲಾಗುತ್ತಿದೆ.<br>
3. ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ನಿಲಯಾರ್ಥಿಗಳಿಗೆ ರೂ. 5000/-ಗಳ ವೆಚ್ಚದಲ್ಲಿ ವಾರ್ತಾ ಪತ್ರಿಕೆ ಮತ್ತು ನಿಯತಕಾಲಿಕೆಗಳನ್ನು ಒದಗಿಸಲಾಗುತ್ತಿದೆ.<br>
4. ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಪ್ರತಿ ವರ್ಷಕ್ಕೆ, ರೂ.20000/-ಗಳ ವೆಚ್ಚದಲ್ಲಿ ಕ್ರೀಡಾ ಸಾಮಾಗ್ರಿಗಳನ್ನು ಒದಗಿಸಲಾಗುತ್ತಿದೆ.<br>
5. ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಸ್ವಚ್ಛತೆ ಮತ್ತು ಸ್ವಚ್ಛತಾ ಸಾಮಗ್ರಿಗಳಿಗಾಗಿ ಪ್ರತಿ ವಿದ್ಯಾರ್ಥಿ ನಿಲಯಕ್ಕೆ ಪ್ರತಿ ತಿಂಗಳಿಗೆ ರೂ.10000/-ಗಳಂತೆ ವೆಚ್ಚ ಮಾಡಲಾಗುತ್ತಿದೆ.<br>
6. ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ವೈದ್ಯಕೀಯ ಸೌಲಭ್ಯ ಒದಗಿಸಲು ಪ್ರತಿ ವಿದ್ಯಾರ್ಥಿ ನಿಲಯಕ್ಕೆ ವಾರ್ಷಿಕವಾಗಿ ಈ ಕೆಳಕಂಡಂತೆ ವೆಚ್ಚವನ್ನು ನೀಡಲಾಗುತ್ತಿದೆ.
<table>
<tr><td>50 ಸಂಖ್ಯಾಬಲದ ವರೆಗೆ</td><td>ರೂ.5,000/-</td></tr>
<tr><td>51 ಕ್ಕೂ ಮೇಲ್ಪಟ್ಟು</td><td>ರೂ.10,000/-</td></tr>
</table>
7. ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ವೈದ್ಯಕೀಯ ಸೌಲಭ್ಯ ಒದಗಿಸಲು ಪ್ರತಿ ವಿದ್ಯಾರ್ಥಿ ನಿಲಯಕ್ಕೆ ಪ್ರಥಮ ಚಿಕಿತ್ಸಾ ಪೆಟ್ಟಿಗೆಯೊಂದಿಗೆ ಬರುವ ಎಲ್ಲಾ ವಸ್ತುಗಳನ್ನು ನೀಡಲಾಗುತ್ತಿದೆ.<br>
8. ಪ್ರತಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯದ ನಿಲಯಾರ್ಥಿಗಳಿಗೆ ಕಠಿಣ ವಿಷಯಗಳಿಗೆ ಗಣಿತ, ವಿಜ್ಞಾನ ಮತ್ತು ಇಂಗ್ಲೀಷ ಭಾಷೆಗಳನ್ನು ಅರೆಕಾಲಿಕ ಭೋಧಕರಿಂದ ಭೋಧಿಸಲಾಗುತ್ತಿದೆ.</td>
</tr>
<tr>
<td>ಇ)</td>
<td>ಈ ಮೇಲ್ಕಂಡ ಜಿಲ್ಲೆಗಳಿಗೆ ಕಳೆದ 3 ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮಂಜೂರಾದ ಅನುದಾನ ಎಷ್ಟು; (ವಿವರ ನೀಡುವುದು)</td>
<td>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ವಿವಿಧ ಯೋಜನೆ/ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಕಳೆದ ಮೂರು ಆರ್ಥಿಕ ವರ್ಷಗಳಲ್ಲಿ ಮಂಜೂರಾದ ಅನುದಾನದ ವಿವರಗಳು ಈ ಕೆಳಕಂಡಂತಿದೆ.
<table>
<tr><th rowspan="3">ಜಿಲ್ಲೆ</th><th colspan="6">ಆರ್ಥಿಕ ವರ್ಷ<br>(ರೂ.ಲಕ್ಷಗಳಲ್ಲಿ)</th></tr>
<tr><th colspan="2">2023-24</th><th colspan="2">2024-25</th><th colspan="2">2025-26</th></tr>
<tr><th>ಬಿಡುಗಡೆ</th><th>ವೆಚ್ಚ</th><th>ಬಿಡುಗಡೆ</th><th>ವೆಚ್ಚ</th><th>ಬಿಡುಗಡೆ</th><th>ವೆಚ್ಚ</th></tr>
<tr><td>ಕಲಬುರಗಿ</td><td>4894.91</td><td>4893.88</td><td>6729.89</td><td>6692.06</td><td>5110.00</td><td>5110.00</td></tr>
<tr><td>ಯಾದಗಿರಿ</td><td>4039.52</td><td>4039.52</td><td>5211.27</td><td>5156.23</td><td>4721.33</td><td>4525.58</td></tr>
</table></td>
</tr>
</table>

| | | |
|---|---|---|
| ಈ) | ಈ ವಸತಿ ನಿಲಯಗಳಲ್ಲಿರುವ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಗೆ ಗುಣಮಟ್ಟದ ಪೌಷ್ಠಿಕ ಆಹಾರ ನೀಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ? | ಇಲಾಖೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯದ ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.1750/- ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯದ ಪ್ರತಿ ವಿದ್ಯಾರ್ಥಿಗೆ ರೂ.1850/- ಗಳ ವೆಚ್ಚದಲ್ಲಿ ಗುಣಮಟ್ಟದ ಭೋಜನಾ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದೆ.<br><br>ಸರ್ಕಾರದದಿಂದ ನಿಗದಿ ಪಡಿಸಿರುವ ಮಾಸಿಕ ಭೋಜನಾ ವೆಚ್ಚದಂತೆ ರಾಜ್ಯಾದ್ಯಂತ ವಲಯವಾರು ಮೂರು ಪ್ರತ್ಯೇಕ ಮೆನುಚಾರ್ಟ್‌ನ್ನು ಸಿದ್ಧಪಡಿಸಿದ್ದು, ಮೆನುಚಾರ್ಟ್ ಅನುಸಾರ ನಿಲಯಾರ್ಥಿಗಳಿಗೆ ಗುಣಮಟ್ಟದ ಆಹಾರವನ್ನು ಸಿದ್ಧಪಡಿಸಿ ಬೆಳಿಗ್ಗೆ ಉಪಹಾರ, ಮಧ್ಯಾಹ್ನ ಊಟ ,ರಾತ್ರಿ ಊಟ ಹಾಗೂ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ಸಂಜೆ ಲಘು ಉಪಹಾರ ಒದಗಿಸಲಾಗುತ್ತಿರುತ್ತದೆ. ಪ್ರತಿ ದಿನ ವಿದ್ಯಾರ್ಥಿಗಳಿಗೆ ತಯಾರಿಸುವ ಆಹಾರ ಮತ್ತು ವಿದ್ಯಾರ್ಥಿಗಳಿಗೆ ನೀಡುತ್ತಿರುವ ಆಹಾರದ ಫೋಟೊಗಳನ್ನು ನಿಲಯ ಮೇಲ್ವಿಚಾರಕರಿಂದ ನಿಲಯ ತಂತ್ರಾಂಶದಲ್ಲಿ ಪಡೆಯಲಾಗುತ್ತಿದೆ. |

ಸಂಖ್ಯೆ:ಹಿಂವಕ **643** ಬಿಎಂಎಸ್ **2026**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು